# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
# Bangalore Development Authority

ಸಂಖ್ಯೆ : ಬೆಂ.ಅ.ಪ್ರಾ/ನಮ/ಅ.ಸ/ಅ.ಅ–1/ತಾ.ಸ–2/ಪೂ/25/2025–26 ದಿನಾಂಕ : 16.07.2025
No. Date :

ಅಭಿಯಂತರ ಸದಸ್ಯರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

ಅನುಸೂಚಿ–ಎ 5
(ಉಪವಿಧಿ ಸಂಖ್ಯೆ:4.1)
**ನಕ್ಷೆ ಮಂಜೂರಾತಿ ಪತ್ರ**

ಶ್ರೀಮತಿ/ಶ್ರೀ

**M/s Binary Vetures,**
**Site No 07, Trinity Complex,**
**Sarjapura Main Road, Sompuara Village**
**Dommasandra, Bangalore-562 125**

ಮಾನ್ಯರೆ,

ಅರ್ಜಿದಾರರಾದ ತಾವು ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿ, ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಬಿ ಹೊಸಹಳ್ಳಿ ಗ್ರಾಮದ ಸರ್ವೆ ನಂ. 110/1 ರಲ್ಲಿನ ರಲ್ಲಿ 02 ಎಕರೆ ವಿಸ್ತೀರ್ಣದ ಪ್ರದೇಶದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಕಟ್ಟಡಕ್ಕೆ ನಕ್ಷೆ ಮಂಜೂರಾತಿ ನೀಡಲು ಕೋರಿರುತ್ತೀರಿ,

ಸದರಿ ಕಟ್ಟಡಗಳಿಗೆ ನಕ್ಷೆ ಮಂಜೂರಾತಿ ನೀಡಲು ಮಾನ್ಯ ಆಯುಕ್ತರವರ ಕಛೇರಿ ಆದೇಶ ಸಂಖ್ಯೆ.1706 ದಿನಾಂಕ: 09.07.2025 ರಂದು ಅನುಮೋದನೆ ನೀಡಿದ್ದು, ನಕ್ಷೆ ಮಂಜೂರಾತಿ ಶುಲ್ಕಗಳನ್ನು ಚಲನ್ ಸಂಖ್ಯೆ: **GN25073240**, ದಿನಾಂಕ: 14.07.2025 ರಂದು ಒಟ್ಟು ರೂ. 78,67,600/– ಗಳನ್ನು ಪಾವತಿಸಲಾಗಿರುತ್ತದೆ.

ಅದರಂತೆ ದಿನಾಂಕ: 16.07.2025 ರಂದು ನಕ್ಷೆ ಮಂಜೂರಾತಿ ನೀಡಲಾಗಿರುತ್ತದೆ. ವಿವರಗಳು ಈ ಕೆಳಕಂಡಂತೆ ಇರುತ್ತವೆ.

| ಗ್ರಾಮ | ಸರ್ವೆ ನಂ. | ಅಂತಸ್ತು | ಎತ್ತರ | ಉದ್ದೇಶ | ಘಟಕ |
|---|---|---|---|---|---|
| ಬಿ ಹೊಸಹಳ್ಳಿ | 110/1 | ನೆಲ +08ಮೇಲಂತಸ್ತು ಮತ್ತು ನೆಲ+02 ಮೇಲಂತಸ್ತಿನಲ್ಲಿ **Amenity Block** | 26.95ಮೀ | ಬಹು ವಸತಿ | 128 |

ಮೇಲ್ಕಂಡ ಕಟ್ಟಡಕ್ಕೆ ನೀಡಿರುವ ನಕ್ಷೆ ಮಂಜೂರಾತಿಯು ದಿನಾಂಕ: 16.07.2025 ರಿಂದ ದಿನಾಂಕ: 15.07.2027 ವರೆಗಿನ ಎರಡು ವರ್ಷಗಳ ಅವಧಿಗೆ ಮಾತ್ರ ಮಾನ್ಯತೆ ಪಡೆದಿರುತ್ತದೆ.

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ಪುಟ ಸಂಖ್ಯೆ: 2 ಕ್ಕೆ ಮುಂದುವರೆದಿದೆ...

ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಮಂಜೂರಾತಿ ನೀಡಲಾಗಿದೆ ಎಂದು ಈ ಮೂಲಕ ತಿಳಿಯಪಡಿಸಿದೆ.

## –:ಷರತ್ತುಗಳು:–

1) ಕಟ್ಟಡದ ಕಾಮಗಾರಿಯ ಆರ್.ಸಿ.ಸಿ ಕಂಬಗಳು ನೆಲಮಟ್ಟಕ್ಕೆ ಎತ್ತರಿಸಿದ ನಂತರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

2) ಬಂಡಿದಾರಿ / ರಾಜ ಕಾಲುವೆ / ಮಳೆ ನೀರು ಚರಂಡಿ ಇನ್ನೂ ಯಾವುದೇ ತರಹದ ಖರಾಬು ಜಮೀನು ಸದರಿ ಜಮೀನಿನ ವಿಸ್ತೀರ್ಣದಲ್ಲಿ ಇದ್ದಲ್ಲಿ, ಆ ಪ್ರದೇಶದಲ್ಲಿ ಯಾವುದೇ ತರಹದ ನಿರ್ಮಾಣದ ಕಾರ್ಯವನ್ನು ಮಾಡುವಂತಿಲ್ಲ ಹಾಗೂ ಇತರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದಲ್ಲ ಮತ್ತು ಅಂತಹ ಪ್ರದೇಶಕ್ಕೆ ಸೂಕ್ತ ರಕ್ಷಣೆ ಒದಗಿಸುವುದು.

3) ಅಭಿವೃದ್ಧಿದಾರರು ಭದ್ರತಾ ಸಿಬ್ಬಂಧಿಯವರನ್ನು ನೇಮಿಸಿ ಕಟ್ಟಡ ನಿರ್ಮಾಣದ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ವಾಹನ ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು, ಹಾಗೂ ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಸ್ವತ್ತಿನ ಒಳಭಾಗದಲ್ಲಿ ಅಳವಡಿಸಿ ನಿರ್ವಹಿಸುವುದು.

4) ಅರ್ಜಿದಾರರು ಶಾಸನಬದ್ಧ ಸಂಸ್ಥೆಗಳಿಗೆ, ಬಿಡಿಎ / ಬಿಬಿಎಂಪಿ / ನಗರ ಸಭೆ / ಪಂಚಾಯತ್ ಗೆ ಯಾವುದಾದರೂ ಬಾಕಿ ಶುಲ್ಕಗಳನ್ನು ಪಾವತಿಸಬೇಕಿದ್ದಲ್ಲಿ ಅಂತಹ ಸಂಸ್ಥೆಗಳು ವಿಧಿಸುವ ಶುಲ್ಕವನ್ನು ಪಾವತಿಸತಕ್ಕದ್ದು.

5) ಮಳೆ ನೀರು ಕೊಯ್ಲನ್ನು ಬೆಂಗಳೂರು ಜಲ ಮಂಡಳಿ ರವರು ನಿಗಧಿಪಡಿಸಿರುವಂತೆ ಕಡ್ಡಾಯವಾಗಿ ಅಳವಡಿಸುವುದು.

6) ಇಬ್ಬಗೆಯ ಕೊಳವೆ ವಿಧಾನವನ್ನು ಕುಡಿಯುವ ನೀರಿಗಾಗಿ ಹಾಗೂ ಇತರೆ ಉದ್ದೇಶಿತ ವ್ಯವಸ್ಥೆಗಳಿಗಾಗಿ ಅಳವಡಿಸುವುದು.

7) ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ನೈರ್ಮಲ್ಯ ಶುದ್ಧೀಕರಣ ಘಟಕವನ್ನು (S.T.P) ಅಳವಡಿಸಿ ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿನ ಶೌಚಾಲಯ, Gardening ಹಾಗೂ ಗಿಡಮರ Lawn ಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು ಮತ್ತು ಇದರಿಂದ ಉತ್ಪತ್ತಿಯಾಗುವ Sewage ಪೂರ್ಣ ನೀರನ್ನು ಯಾವುದೇ ಕಾರಣಕ್ಕೂ ಕೆರೆ/ಹಳ್ಳ/ಕಣಿವೆ/ಹೊಳೆಗೆ ಬಿಡತಕ್ಕದಲ್ಲ.

8) ಅಭಿವೃದ್ಧಿದಾರರು ಕಟ್ಟಡದ ಆವರಣಗಳಲ್ಲಿ ಗಿಡ ಮರಗಳನ್ನು ಬೆಳೆಸಿ ಪರಿಸರವನ್ನು ಸಂರಕ್ಷಿಸುವ ಷರತ್ತಿಗೆ ಬದ್ಧರಾಗಿರತಕ್ಕದ್ದು.

9) ಅಭಿವೃದ್ಧಿದಾರರು ಕಟ್ಟಡಗಳಿಗೆ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

10) ಅಭಿವೃದ್ಧಿದಾರರು ಟ್ರಾನ್ಸ್ ಫಾರ್ಮರ್ ಗಾಗಿ ಗುರುತಿಸಿರುವ ಪ್ರದೇಶದಲ್ಲಿ ಅಳವಡಿಸತಕ್ಕದ್ದು, ಬೇರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದಲ್ಲ.

11) ಅಭಿವೃದ್ಧಿದಾರರು ಕಟ್ಟಡದ ಸುರಕ್ಷತೆ ಹಾಗೂ ಭದ್ರತೆಯ, ಕಟ್ಟಡದ ವಿನ್ಯಾಸದ ಬಗ್ಗೆ ಸಂಪೂರ್ಣವಾಗಿ ಜವಬ್ದಾರರಾಗಿರತಕ್ಕದ್ದು. ಕಟ್ಟಡದ ವಿನ್ಯಾಸದ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯ ಹೊಣೆಗಾರಿಕೆ ಮತ್ತು ಜವಾಬ್ದಾರಿಯನ್ನು ಹೊಂದಿರುವುದಿಲ್ಲ. ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣಕ್ಕೆ ಕಾರ್ಮಿಕರು ಹಾಗೂ ನಿರ್ಮಾಣದ ಬಗ್ಗೆ ಎಲ್ಲಾ ಸೂಕ್ತ ಕ್ರಮಗಳನ್ನು ಅಳವಡಿಸಿಕೊಳ್ಳತಕ್ಕದ್ದು, ನಿರ್ಮಾಣ ಸಮಯದಲ್ಲಿ ಯಾವುದೇ ತರಹದ ಅನಾಹುತ ಅಥವಾ ಪ್ರಾಣ ಹಾನಿಯಾಗದಂತೆ ಕಟ್ಟುನಿಟ್ಟಿನ ಎಚ್ಚರವಹಿಸತಕ್ಕದ್ದು, ಯಾವುದೇ ತರಹದ ಅನಾಹುತಕ್ಕೆ ಗುತ್ತಿಗೆ ಪಡೆದ ನಿರ್ಮಾಣದಾರರು ನೇರ ಜವಬ್ದಾರರಾಗಿರುತ್ತಾರೆ. ಅಂತಹ ಪ್ರಸಂಗ ಕಂಡುಬಂದಲ್ಲಿ ಕಾನೂನು ಕ್ರಮ ಜರುಗಿಸುವುದಲ್ಲದೆ ನೀಡಲಾಗಿರುವ ಮಂಜೂರಾತಿಯು ತಂತಾನೆ ರದ್ದಾಗುತ್ತದೆ.

12) ಅಭಿವೃದ್ಧಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಅಥವಾ ಇನ್ನಾವುದೇ ಕಟ್ಟಡದ ಅನುಪಯುಕ್ತ ಸಾಮಗ್ರಿಗಳಿಂದ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು. ಇದಕ್ಕೆ ಅನುಗುಣವಾಗಿ ಬ್ಯಾರಿಕೇಡಿಂಗ್ ನ್ನು ಅಳವಡಿಸಿ ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು.

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ಪುಟ ಸಂಖ್ಯೆ: 3 ಕ್ಕೆ ಮುಂದುವರೆದಿದೆ...

13) ಯೋಜನೆಯಲ್ಲಿ ಘನ ತ್ಯಾಜ್ಯಗಳನ್ನು ಪ್ಲಾಸ್ಟಿಕ್ ಹಾಗೂ ಇತ್ಯಾದಿಯಾಗಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು ಹಾಗೂ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

14) ಕಟ್ಟಡದ ಕಾಮಗಾರಿ ಆರಂಭಿಸುವ ಮುನ್ನ ಅರ್ಜಿದಾರರು ಲೈಸನ್ಸ್ ಅನ್ನು ಸ್ಥಳೀಯ ಸಂಸ್ಥೆಯಿಂದ ಪಡೆಯತಕ್ಕದ್ದು.

15) ಕಟ್ಟಡ ನಿರ್ಮಾಣದ ಸಮಯದಲ್ಲಿ ಸೆಂಟ್ರಿಂಗ್ ಅಥವಾ ಇನ್ನಿತರೆ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದಲ್ಲಿ ಅದಕ್ಕೆ ಅರ್ಜಿದಾರರು ಸಂಪೂರ್ಣ ಜವಾಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರಾತಿ ನೀಡಿದ ಇಲಾಖೆಯು ಜವಾಬ್ದಾರರಾಗಿರುವುದಿಲ್ಲ. ಆದುದರಿಂದ ನಿರ್ಮಾಣ ಸಮಯದಲ್ಲಿ ಎಲ್ಲಾ ಜಾಗೃತ / ಸುರಕ್ಷಿತ ಕ್ರಮಗಳನ್ನು ಕಟ್ಟುನಿಟ್ಟಾಗಿ ಅಳವಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ ನೀಡಲಾಗಿರುವ ನಕ್ಷೆ ಮಂಜೂರಾತಿ ಯಾವ ಮುನ್ಸೂಚನೆ ಇಲ್ಲದೇ ರದ್ದುಗೊಳಿಸಲಾಗುವುದು.

16) ಸದರಿ ಕಟ್ಟಡಕ್ಕೆ ವಿದ್ಯುತ್ ಛಕ್ತಿ ವ್ಯವಸ್ಥೆಯನ್ನು BESCOM ವತಿಯಿಂದ ಕಲ್ಪಿಸತಕ್ಕದ್ದು & ಅರ್ಜಿದಾರರು ಕಟ್ಟಡಕ್ಕೆ ಬೇಕಾದ ವಿದ್ಯುಚ್ಛಕ್ತಿಯ ಪರ್ಯಾಯ ವ್ಯವಸ್ಥೆಗಾಗಿ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

17) ಅಭಿವೃದ್ಧಿದಾರರು ಬೆಟರ್ ಮೆಂಟ್ ತೆರಿಗೆ ಪಾವತಿಸುವ ಕುರಿತು ಮಾನ್ಯ ಉಚ್ಛ ನ್ಯಾಯಾಲಯದ ನೀಡುವ 45727-45730/2011 (ಬೆಂಅಪ್ರಾ), ದಿನಾಂಕ: 03.09.2012ರ ತೀರ್ಮಾನದ ವಿರುದ್ಧ ಪ್ರಾಧಿಕಾರವು ಮೇಲ್ಮನವಿ ಸಲ್ಲಿಸಲು ತೀರ್ಮಾನಿಸಿದ್ದು, ಮೇಲ್ಮನವಿಯ ಕುರಿತು ನ್ಯಾಯಾಲಯ ನೀಡುವ ತೀರ್ಪಿಗೆ ಬದ್ಧರಾಗಿರಲು ಷರತ್ತಿಗೆ ಒಳಪಡಿಸಲಾಗಿದೆ.

18) ಅಭಿವೃದ್ಧಿದಾರರ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲಿಕತ್ವದ ಬಗ್ಗೆ ಯಾವುದೇ ತಪ್ಪು ಮಾಹಿತಿ / ದಾಖಲಾತಿ ನೀಡಿದ್ದಲ್ಲಿ, ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ನಕ್ಷೆ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮಕೈಗೊಳ್ಳಲಾಗುವುದು.

19) ಅಭಿವೃದ್ಧಿದಾರರು ಕುಡಿಯುವ ನೀರಿನ ಸರಬರಾಜಿಗಾಗಿ ಸಂಬಂಧಪಟ್ಟ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯನ್ನು ಅಥವಾ ಸ್ಥಳೀಯ ಸಂಸ್ಥೆಯನ್ನು ಅವಲಂಬಿಸದೆ ನೀರಿನ ಸರಬರಾಜಿಗಾಗಿ ತಮ್ಮ ಸ್ವಂತ ವ್ಯವಸ್ಥೆಯನ್ನು ಮಾಡಿಕೊಳ್ಳತಕ್ಕದ್ದು.

20) ಅಭಿವೃದ್ಧಿದಾರರು ಕಟ್ಟಡದ ಕಾಮಗಾರಿ ಪ್ರಾರಂಭಿಸುವ ಮುನ್ನ ಸದರಿ ಕಟ್ಟಡಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರುಗಳಿಗೆ ಶೌಚಾಲಯಗಳನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು ಹಾಗೂ ಸದರಿ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಇಲ್ಲವಾದಲ್ಲಿ ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗುವುದಿಲ್ಲ ಹಾಗೂ ನೀಡಲಾಗಿರುವ ನಕ್ಷೆ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆಯಿಲ್ಲದೆ ರದ್ದುಪಡಿಸಲಾಗುವುದು.

21) ಕಟ್ಟಡ ನಿರ್ಮಾಣ ಸಮಯದಲ್ಲಿ ಸುತ್ತಮುತ್ತಲಿನ ಪ್ರದೇಶಕ್ಕೆ ಅನಗತ್ಯ ಶಬ್ದ ಮಾಲಿನ್ಯ ತಡೆಗಟ್ಟುವ ಸಂಬಂಧ, ನಿರ್ಮಾಣದ ಹೊರಭಾಗಗಳಿಗೆ ಅಗತ್ಯ ರಕ್ಷಣಾ ಕವಚವನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿರವರ ಸಲಹೆಯಂತೆ ಕಡ್ಡಾಯವಾಗಿ ಅಳವಡಿಸತಕ್ಕದ್ದು.

22) ಅಭಿವೃದ್ಧಿದಾರರು ವಾಹನ ನಿಲುಗಡೆಯ ಸ್ಥಳದಲ್ಲಿ ಕಡ್ಡಾಯವಾಗಿ ವಿದ್ಯುತ್ ವಾಹನಗಳಿಗೆ ಚಾರ್ಜಿಂಗ್ ಪಾಯಿಂಟ್ ಗಳನ್ನು ಅಳವಡಿಸತಕ್ಕದ್ದು.

23) ಅಭಿವೃದ್ಧಿದಾರರು ಸಿಟಿ ಮಾಸ್ಟರ್ ಪ್ಲಾನ್ ಗಳಲ್ಲಿ ಗುರುತಿಸಿರುವಂತೆ ವಿದ್ಯುತ್ ವಾಹನಗಳ ಚಾರ್ಜಿಂಗ್ ಗಳಿಗೆ ಸೂಕ್ತವಾದ ಮೀಸಲು ಸ್ಥಳಗಳನ್ನು ಕಾಯ್ದಿರಿಸತಕ್ಕದ್ದು.

24) ಗೌರವಾನ್ವಿತ ರಾಷ್ಟ್ರೀಯ ಹಸಿರು ನ್ಯಾಯಪೀಠ ರವರ ಪತ್ರ ಸಂಖ್ಯೆ: PCB/031/C&D/2016/5392/2020-21 ದಿ: 25.02.2021 ರಂತೆ Construction and Demolition (C & D) ಕಸವನ್ನು ವಿಲೆ ಮಾಡುವ ಬಗ್ಗೆ ನಿರ್ವಹಣೆ ಯೋಜನೆಯನ್ನು ULB (Urban Local Body) ರವರಿಗೆ ಸಲ್ಲಿಸಿ ಅನುಮೋದನೆ ಪಡೆದು ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡುವ ಮುನ್ನ ಸಲ್ಲಿಸುವುದು.

25) ಪ್ರಶ್ನಿತ ಪ್ರದೇಶದಲ್ಲಿ 240.0ಚ.ಮೀ FAR ಪ್ರದೇಶಕ್ಕೆ ಒಂದು ಮರದಂತೆ ವಿವಿಧ ಜಾತಿ ಗಿಡ, ಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು.

ಪುಟ ಸಂಖ್ಯೆ: 4 ಕ್ಕೆ ಮುಂದುವರೆದಿದೆ...

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

26) ಬಫರ್ ವಲಯಕ್ಕೆ ಸಂಬಂಧಿಸಿದಂತೆ ಮಾನ್ಯ ಹಸಿರು ನ್ಯಾಯಾಧಿಕರಣವು (NGT) ಈಗಾಗಲೇ ಹೊರಡಿಸಿರುವ ನಿರ್ದೇಶನಗಳಿಗೆ ಮತ್ತು ಆಗಿಂದಾಗ್ಗೆ ಹೊರಡಿಸುವ / ವಿಧಿಸುವ ಯಾವುದೇ ಷರತ್ತುಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು ಹಾಗೂ ಬಫರ್ ವಲಯಕ್ಕೆ ಸಂಬಂಧಿಸಿದಂತೆ ಅರ್ಜಿದಾರರು ತಪ್ಪು ಮಾಹಿತಿಯನ್ನು ನೀಡಿದಲ್ಲಿ ನಕ್ಷೆ ಮಂಜೂರಾತಿಯನ್ನು ರದ್ದುಪಡಿಸುವ ಷರತ್ತಿಗೆ ಒಳಪಟ್ಟಿದೆ.

27) ಪ್ರಶ್ನಿತ ಜಮೀನಿನ ಮುಂಭಾಗದಲ್ಲಿರುವ 626.71ಚ.ಮೀ ವಿಸ್ತೀರ್ಣದ ಪ್ರದೇಶವನ್ನು ಪ್ರಾಧಿಕಾರಕ್ಕೆ ಪುಕ್ಕಟೆಯಾಗಿ ಪರಿತ್ಯಾಜನಾ ಪತ್ರದ ಮೂಲಕ ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಪ್ರಸ್ತಾವನೆ ಸಲ್ಲಿಸುವ ಮುನ್ನ ಹಸ್ತಾಂತರಿಸುವುದು.

28) Member Secretary, SEIAA ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಮುನ್ನ ಪಡೆದು ಸಲ್ಲಿಸುವುದು.

29) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಷರತ್ತುಗಳಿಗೆ ಅರ್ಜಿದಾರರು ಭದ್ದರಾಗಿರತಕ್ಕದ್ದು.

ಆಯುಕ್ತರ ಪರವಾಗಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

**ಯಥಾಪ್ರತಿಯನ್ನು ಕಾರ್ಯಪಾಲಕ ಅಭಿಯಂತರರು, ಪೂರ್ವ ವಿಭಾಗ, ಬಿ.ಡಿ.ಎ. ವಾಣಿಜ್ಯ ಸಂಕೀರ್ಣ, ಹೆಚ್.ಎಸ್.ಆರ್. ಬಡಾವಣೆ, ಬೆಂಗಳೂರು ರವರ ಮಾಹಿತಿಗಾಗಿ ರವಾನಿಸಿದೆ.**

# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

ಅಭಿಯಂತರ ಸದಸ್ಯರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು, ದಿನಾಂಕ: 11.07.2025

ರವರಿಗೆ,

M/s Binary Vetures,
Site No 07, Trinity Complex,
Sarjapura Main Road, Sompura Village,
Dommasandra, Bangalore-562 125

## ಸೂಚನಾ ಪತ್ರ

ಬೆಂಗಳೂರು ಪೂರ್ವ ತಾಲ್ಲೂಕು, ಸರ್ಜಾಪುರ ಹೋಬಳಿ, ಬಿ ಹೊಸಹಳ್ಳಿ ಗ್ರಾಮದ ಸರ್ವೆ ನಂ. 110/1 ರಲ್ಲಿ 02 ಎಕರೆ ವಿಸ್ತೀರ್ಣದ ಪ್ರದೇಶದಲ್ಲಿ ನೆಲ+08 ಮೇಲಂತಸ್ತುಗಳ ಒಟ್ಟು 128ವಸತಿ ಘಟಕಗಳ ಕಟ್ಟಡಕ್ಕೆ ನಕ್ಷೆ ಮಂಜೂರಾತಿಯನ್ನು ನೀಡಲು ಮಾನ್ಯ ಆಯುಕ್ತರರವರ ಆದೇಶ ದಿನಾಂಕ.09.07.2025 ರಂದು ಅನುಮೋದನೆ ನೀಡಿರುವ ಮೇರೆಗೆ ಈ ಕೆಳಕಂಡ ಶುಲ್ಕಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆವರಣದಲ್ಲಿರುವ ಕೆನರಾ ಬ್ಯಾಂಕ್ / ಇಂಡಿಯನ್ ಓವರ್ಸೀಸ್ ಬ್ಯಾಂಕಿಗೆ ಆಯುಕ್ತರ, ಬೆಂಅಪ್ರಾ ರವರ ಹೆಸರಿನಲ್ಲಿ ಪಾವತಿಸಲು ಸೂಚಿಸಿದೆ.

ಲೆಕ್ಕ ಶಿರ್ಷಿಕೆ | ಮೊತ್ತ ರೂಗಳಲ್ಲಿ

| | | |
|---|---|---|
| 182 | ನಕ್ಷೆ ಪರಿಶೀಲನಾ ಶುಲ್ಕ | 9,99,016.00 |
| 191 | ನೆಲ ಬಾಡಿಗೆ | 10,53,616.00 |
| 183 | ನಕ್ಷೆ ಪ್ರತಿಗಳ ಶುಲ್ಕ | 32,000.00 |
| 185 | ಕಟ್ಟಡ ಅನುಮತಿ ಶುಲ್ಕ ಕಲಂ -15 | 5,11,684.00 |
| 199 | ಕೆರೆ ಅಭಿವೃದ್ಧಿ ಶುಲ್ಕ | 2,02,340.00 |
| 345 | ವರ್ತುಲ ರಸ್ತೆಯನ್ನು ನಿರ್ಮಿಸುವ ಉದ್ದೇಶಕ್ಕಾಗಿ ಮೇಲ್ತೇರಿಗೆ | 51,168.00 |
| 538 | ತ್ವರಿತ ಸಮೂಹ ಸಾರಿಗೆ ವ್ಯವಸ್ಥೆಯನ್ನು ಸ್ಥಾಪಿಸುವ ಉದ್ದೇಶಕ್ಕಾಗಿ ಮೇಲ್ತೆರಿಗೆ | 2,55,842.00 |
| | **ಒಟ್ಟು ಮೊತ್ತ** | **31,05,666.00** |
| | 'ಸಿ' ಜಿ.ಎಸ್.ಟಿ 9% (ಜಿ.ಎಸ್.ಟಿ ಸಂಖ್ಯೆ: 29AAALB0060D1ZS) | 2,79,510.00 |
| | 'ಎಸ್' ಜಿ.ಎಸ್.ಟಿ 9% (ಜಿ.ಎಸ್.ಟಿ ಸಂಖ್ಯೆ: 29AAALB0060D1ZS) | 2,79,510.00 |
| 338 | ನೀರು ಸರಬರಾಜು ಯೋಜನೆಯನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ ಉಪಕರ | 51,168.00 |
| 537 | ಕೊಳಗೇರಿ ಸುಧಾರಣೆಯ ಉದ್ದೇಶಕ್ಕಾಗಿ ಉಪಕರ | 25,584.00 |
| 546 | ಕಾರ್ಮಿಕ ಕಲ್ಯಾಣ ನಿಧಿ | 29,38,231.00 |
| 493 | ಭದ್ರತಾ ಠೇವಣಿ | 11,10,018.00 |
| 540 | ಕರ್ನಾಟಕ ಮುಂದ್ಯಾಂಕ ಕಾಯ್ದೆ 1957 ರ ಅನುಚ್ಛೇದ 32(ಎ) ರನ್ವಯ ಕಟ್ಟಡ ಮಂಜೂರಾತಿ ಶುಲ್ಕದ ಶೇ.1 % ರಷ್ಟು ಮುಂದ್ರಾಂಕ ಶುಲ್ಕ | 77,897.00 |
| 198 | ಪೂರ್ಣಾಂಕಕ್ಕೆ | 16.00 |
| | **ಪಾವತಿಸಬೇಕಾಗಿರುವ ಒಟ್ಟಾರೆ ಮೊತ್ತ** | **78,67,600.00** |

(ಎಪ್ಪತ್ತೆಂಟು ಲಕ್ಷದ ಅರವತ್ತೇಳು ಸಾವಿರದ ಆರುನೂರು ರೂಗಳು ಮಾತ್ರ)

ಮೇಲೆ ನಮೂದಿಸಿದ ಶುಲ್ಕಗಳನ್ನು ಸೂಚನಾ ಪತ್ರವನ್ನು ನೀಡಿದ ದಿನಾಂಕದಿಂದ ಮೂವತ್ತು ದಿನಗಳೊಳಗೆ ಬಿ.ಡಿ.ಎ ಖಾತೆಗೆ ಪಾವತಿಸಿರುವ ಚಲನ್ ಅನ್ನು ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ.

11/7/25

ತಾಂತ್ರಿಕ ಸಹಾಯಕರು-2
ಬೆಂ.ಅ.ಪ್ರಾ , ಬೆಂಗಳೂರು.

ಪ್ರತಿಯನ್ನು:-

ಮ್ಯಾನೇಜರ್, ಕೆನರಾ ಬ್ಯಾಂಕ್ / ಇಂಡಿಯನ್ ಓವರ್ಸೀಸ್ ಬ್ಯಾಂಕ್,
ಬಿ.ಡಿ.ಎ ಎಕ್ಸ್ ಟೆನ್ಷನ್, ಕೌಂಟರ್,
ಕೆ.ಪಿ. ವೆಸ್ಟ್, ಬೆಂಗಳೂರು.

*Recipient Copy*

# BANGALORE DEVELOPMENT AUTHORITY

T.Chowdaiah Road, Kumarapark West, Banglaore-560020
GSTIN:29AAALB0060D1ZS
PAN NO : AAALB0060D
State Name : Karnataka, Code : 29

## REMITTANCE CHALLAN

No. : **GN25073240** Date : 14-Jul-25

Through : **2828201002001**

| Particulars | Amount |
|---|---|
| Account : | |
| 11182 PLAN PROCESSING / SCRUITINY FEE | 9,99,016.00 |
| 11191 GROUND RENT | 10,53,616.00 |
| 11183 PLAN COPY / RCDP / REGN / RENWAL CONTRA FEE | 32,000.00 |
| 11185 Betterment charges | 5,11,684.00 |
| 11199 Lake development fee | 2,02,340.00 |
| 337345 RING ROAD CESS | 51,168.00 |
| 337538 M R T S CESS | 2,55,842.00 |
| 331530 CGST | 2,79,510.00 |
| 331531 SGST | 2,79,510.00 |
| 337539 CAUVERY WATER CESS | 51,168.00 |
| 337537 SLUM CLEARANCE CESS | 25,584.00 |
| 336546 W W C | 29,38,231.00 |
| 334493 Security deposit - contractors | 11,10,018.00 |
| 337540 STAMP DUTY FEES | 77,897.00 |
| 16188 Other allottee / Contractor receipts | 16.00 |

Bank Transaction Details:
11182 PLAN PROCESSING / SCRUITINY FEE,Federal Bank (India)

RTGS FDRLR52025071400998036 14-Jul-25 78,67,600.00

Amount (in words) :
INR Seventy Eight Lakh Sixty Seven Thousand Six Hundred Only

₹ 78,67,600.00

continued ...

Recipient Copy

# BANGALORE DEVELOPMENT AUTHORITY

T.Chowdaiah Road, Kumarapark West, Banglaore-560020
GSTIN:29AAALB0060D1ZS
PAN NO : AAALB0060D
State Name : Karnataka, Code : 29

## REMITTANCE CHALLAN

*(Page 2)*

No. : GN25073240 Date : 14-Jul-25

Through : 2828201002001

| Particulars | Amount |
|---|---|

Name : M/S BINARY VETURES
Site No / Flat No : SY NO 110/1 B HOSEHALLI
Layout / Flat No :SARJAPURA HOBLI

*GN25073240*

केनरा बैंक CANARA BANK
14 JUL 2025
बी.डी.ए. कॉम्प्लेक्स शाखा, बेंगलूरु-560 020
B.D.A. Complex Br., Bengaluru-560 020

Bank Seal & Signatory

NOTE : MERE ACCEPTANCE OF THE REMITTANCE BY THE BANK DOES NOT AUTOMATICALLY CONFER ON THE PAYER'S BENEFITS EXPECTED FROM SUCH PAYMENTS. THE PAYER IS EXPECTED TO ENSURE COMPLIANCE WITH THE VARIOUS REQUIREMENTS OF BDA BEFORE NECESSARY BENEFITS ACCRUE TO HIM / HER.

(RECEIPTS ISSUED AGAINST PAY ORDERS / DRAFTS SUBJECT TO REALISATION)